# ಕರ್ನಾಟಕ ಸರ್ಕಾರದ ನಡವಳಿಗಳು.

ವಿಷಯ: ಶ್ರೀಮತಿ ಕಮಲವ್ವ ಶಿವನಗೌಡ ಪಾಟೀಲ, ಅಧ್ಯಕ್ಷರು, ಚಿಕ್ಕಬಾಗೇವಾಡಿ ಗ್ರಾಮ ಪಂಚಾಯತಿ, ಬೈಲಹೊಂಗಲ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 48(4) ರನ್ವಯ ಕ್ರಮ ಜರುಗಿಸುವ ಬಗ್ಗೆ.

ಓದಲಾಗಿದೆ:

1) ಅಪರ ಪೋಲಿಸ್ ಮಹಾನಿರ್ದೇಶಕರು, ಭ್ರಷ್ಟಾಚಾರ ನಿಗ್ರಹ ದಳ, ಬೆಂಗಳೂರು ಇವರ ಪತ್ರ ಸಂಖ್ಯೆ: ಎಸಿಬಿ/ಬೆಳಗಾವಿ/ಮೊ.ಸ.02/2016, ದಿನಾಂಕ 01.12.2016
2) ಶ್ರೀಮತಿ ಕಮಲವ್ವ ಶಿವನಗೌಡ ಪಾಟೀಲ, ಅಧ್ಯಕ್ಷರು, ಚಿಕ್ಕಬಾಗೇವಾಡಿ ಗ್ರಾಮ ಪಂಚಾಯತಿ, ಬೈಲಹೊಂಗಲ ತಾಲ್ಲೂಕು, ಬೆಳಗಾವಿ ಜಿಲ್ಲೆ ಕಾರಣ ಕೇಳಿ ನೋಟೀಸಿಗೆ ಸಲ್ಲಿಸಿರುವ ಉತ್ತರ, ದಿನಾಂಕ 06.03.2017
3) ಸರ್ಕಾರದ ಸಮಸಂಖ್ಯೆಯ ಆದೇಶ, ದಿನಾಂಕ 04.07.2017
4) ಮಾನ್ಯ ಉಚ್ಚ ನ್ಯಾಯಾಲಯದ ದಾವೆ ಸಂಖ್ಯೆ: 107835/2017(ಎಲ್‌ಬಿ-ಆರ್‌ಇಎಸ್) ರ ದಿನಾಂಕ 16.03.2018
5) ಸಮಸಂಖ್ಯೆಯ ವಿಚಾರಣೆಗೆ ಹಾಜರಾಗಲು ತಿಳುವಳಿಕೆ ಪತ್ರ, ದಿನಾಂಕ 27.07.2017

ಪ್ರಸ್ತಾವನೆ:

ಮೇಲೆ ಓದಲಾದ (1) ರಲ್ಲಿ ಅಪರ ಪೋಲಿಸ್ ಮಹಾ ನಿರ್ದೇಶಕರವರ ಕಛೇರಿ, ಭ್ರಷ್ಟಾಚಾರ ನಿಗ್ರಹ ದಳ, ಬೆಂಗಳೂರು ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ, ದಿನಾಂಕ 05.11.2016 ರಂದು ಭ್ರಷ್ಟಾಚಾರ ನಿಗ್ರಹ ದಳ, ಬೆಳಗಾವಿ ಇಲ್ಲಿಗೆ ಶ್ರೀ ಸುಧೀರ ಚಂದ್ರಪ್ಪ ಕಂಗ್ರಾಳಿ, ಕೆಕೆ ಕೊಪ್ಪ ಗ್ರಾಮ ಇವರು ಸಲ್ಲಿಸಿದ ದೂರಿನ ಮೇರೆಗೆ ಚಿಕ್ಕ ಬಾಗೇವಾಡಿ ಗ್ರಾಮ ಪಂಚಾಯತಿ ವತಿಯಿಂದ ಗಿರಿಯಾಲ ಕೆ.ಬಿ ಗ್ರಾಮದಲ್ಲಿ ಎರಡು ಸಿ.ಡಿ. ಕಾಮಗಾರಿಗಳ ಬಿಲ್ ಪಾವತಿಗೆ ಶ್ರೀಮತಿ ಕಮಲವ್ವ ಶಿವನಗೌಡ ಪಾಟೀಲ, ಅಧ್ಯಕ್ಷರು, ಚಿಕ್ಕಬಾಗೇವಾಡಿ ಗ್ರಾಮ ಪಂಚಾಯತಿ ಇವರು ರೂ.6,500/- ಗಳ ಲಂಚದ ಹಣಕ್ಕೆ ಬೇಡಿಕೆ ಇಟ್ಟಿದ್ದು, ದಿನಾಂಕ 05.11.2016 ರಂದು ಶ್ರೀಮತಿ ಕಮಲವ್ವ ಶಿವನಗೌಡ ಪಾಟೀಲ, ಅಧ್ಯಕ್ಷರು ಇವರನ್ನು ಟ್ರಾಪ್ ಪ್ರಕರಣದಲ್ಲಿ ದಸ್ತಗಿರಿ ಮಾಡಿದ್ದು, ಸದರಿಯವರನ್ನು ಗ್ರಾಮ ಪಂಚಾಯತಿಯ ಸದಸ್ಯತ್ವ ಸ್ಥಾನದಿಂದ ರದ್ದುಪಡಿಸಲು ಕೋರಿರುತ್ತಾರೆ ಹಾಗೂ ಮೇಲೆ ಓದಲಾದ (2) ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತಿ, ಬೆಳಗಾವಿ ಇವರು ಸಹ ಈ ಬಗ್ಗೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (2) ರಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 48(4) ಮತ್ತು 43ಎ ರನ್ವಯ ಏಕೆ ಕ್ರಮ ಜರುಗಿಸಬಾರದು ಎಂಬುದರ ಬಗ್ಗೆ ವಿವರಣೆ ನೀಡಲು ತಿಳಿಸಿ ಜಾರಿಗೊಳಿಸಲಾದ ಕಾರಣ ಕೇಳಿ ನೋಟೀಸಿಗೆ ಸದರಿ ಅಧ್ಯಕ್ಷರು ಕೆಳಗಿನಂತೆ ಲಿಖಿತ ಹೇಳಿಕೆ ಸಲ್ಲಿಸಿರುತ್ತಾರೆ.

> "ತನ್ನ ಮೇಲೆ ಯಾವುದೇ ಎ.ಸಿ.ಬಿ ದಾಳಿ ಮಾಡಿದ ಘಟನೆ ನಡೆದಿರುವುದಿಲ್ಲ ಮತ್ತು ಶ್ರೀ ಸುಧೀರ ಚಂದ್ರಪ್ಪ ಕಂಗ್ರಾಳಿ ಇವರಿಂದ ಯಾವುದೇ ರೀತಿ ಲಂಚದ ಹಣವನ್ನು ಕೇಳಲಿಲ್ಲ, ತನ್ನ ಮೇಲೆ ಸುಳ್ಳು ಆರೋಪ ಮಾಡಲಾಗಿದೆ ಎಂದು ತಿಳಿಸಿರುತ್ತಾರೆ. ಹಾಗೂ ಸದರಿಯವರು ಕಳೆದ 20 ವರ್ಷಗಳಿಂದ ಸಮಾಜ ಸೇವೆ ಮಾಡುತ್ತಿದ್ದು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಲ್ಲಿ 2 ವರ್ಷ ಉಪಾಧ್ಯಕ್ಷರಾಗಿ ಸೇವೆ ಸಲ್ಲಿಸಿರುತ್ತೇನೆ. ಎಸ್.ಪಿ.ಸೋನಿಯಾ ನಾರಂಗ ಇವರ ಸಹಾಯದಿಂದ ಹಲವಾರು ಹೆಣ್ಣು ಮಕ್ಕಳ ಸಮಸ್ಯೆಗಳನ್ನು ಬಗೆಹರಿಸಿದ್ದು, ಕೃಷಿ ಇಲಾಖೆಯಿಂದ ತರಬೇತಿ ಪಡೆದಿರುತ್ತೇನೆ. ನನ್ನ ಮೇಲೆ ಸುಳ್ಳು ಆರೋಪ ಮಾಡಲಾಗಿದ್ದು, ಅಧ್ಯಕ್ಷರ ಹುದ್ದೆಯಲ್ಲಿ ಮುಂದುವರೆದು ಜನಸೇವೆ ಮಾಡಲು ಅವಕಾಶ ನೀಡಲು ಕೋರಿರುತ್ತಾರೆ"

ಆಪಾದಿತ ಚುನಾಯಿತ ಪ್ರತಿನಿಧಿಯಿಂದ ಆಕ್ಷೇಪಣೆಗಳನ್ನು ಪಡೆದು ಪರಿಶೀಲಿಸಿ, ಸದರಿ ಗ್ರಾಮ ಪಂಚಾಯತಿ ಅಧ್ಯಕ್ಷರನ್ನು ಲಂಚದ ಹಣವನ್ನು ಸ್ವೀಕರಿಸುವಾಗ ಭ್ರಷ್ಟಾಚಾರ ನಿಗ್ರಹ ದಳ ಟ್ರ್ಯಾಪ್ ಮಾಡಿರುವ ಪ್ರಕರಣವು ದುರ್ನಡತೆಯ ಗಂಭೀರ ಸ್ವರೂಪದಾಗಿರುತ್ತದೆ. ಈ ವಿಷಯದಲ್ಲಿ ಆರಕ್ಷಕ ನಿರೀಕ್ಷಕರು, ಎ.ಸಿ.ಬಿ. ಪೋಲೀಸ್ ಠಾಣೆ, ಬೆಳಗಾವಿ ರವರು ಎಫ್.ಐ.ಆರ್. ಹಾಕಿರುವುದರಿಂದ ಮೇಲ್ನೋಟಕ್ಕೆ ದುರ್ನಡತೆಯು ಸಾಬೀತಾಗಿರುವ ಹಿನ್ನೆಲೆಯಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 48ರ ಉಪ ಪ್ರಕರಣ 4ರನ್ವಯ ಶ್ರೀಮತಿ ಕಮಲವ್ವ ಶಿವನಗೌಡ ಪಾಟೀಲ, ಅಧ್ಯಕ್ಷರು, ಚಿಕ್ಕಬಾಗೇವಾಡಿ ಗ್ರಾಮ ಪಂಚಾಯತಿ, ಬೈಲಹೊಂಗಲ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರನ್ನು ದುರ್ನಡತೆ ಎಸಗಿರುವ ಆರೋಪದ ಮೇಲೆ ಸದರಿ ಗ್ರಾಮ ಪಂಚಾಯತಿಯ ಅಧ್ಯಕ್ಷ ಸ್ಥಾನದಿಂದ ತೆಗೆದುಹಾಕಿ ಮೇಲೆ ಓದಲಾದ (3) ರಲ್ಲಿ ಆದೇಶಿಸಲಾಗಿದೆ.

ಮೇಲೆ ಓದಲಾದ (4) ರಲ್ಲಿ ಪ್ರಕರಣವನ್ನು ಮರು ಪರಿಶೀಲಿಸಿ ಆಪಾದಿತರಿಗೆ ಅಹವಾಲು ಹೇಳಿಕೊಳ್ಳಲು ಅವಕಾಶ ನೀಡಿ ಸೂಕ್ತ ಆದೇಶ ಹೊರಡಿಸುವಂತೆ ಮಾನ್ಯ ಉಚ್ಚ ನ್ಯಾಯಾಲಯವು ಆದೇಶಿಸಿರುತ್ತದೆ.

ಮೇಲೆ ಓದಲಾದ (5) ರನ್ವಯ ಮಾನ್ಯ ಉಚ್ಚ ನ್ಯಾಯಾಲಯದ ಆದೇಶದ ಹಿನ್ನೆಲೆಯಲ್ಲಿ ದಿನಾಂಕ 07.06.2018 ಮತ್ತು 04.08.2018 ರಂದು ಮೌಖಿಕ ವಿಚಾರಣೆಗೆ ಪ್ರಕರಣವನ್ನು ಕರೆಯಲಾಯಿತು. ದಿನಾಂಕ 04.08.2018 ರಂದು ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್)ರವರ ನ್ಯಾಯಾಲಯದಲ್ಲಿ ಎಲ್ಲರ ಅಹವಾಲನ್ನು ಆಲಿಸಲಾಗಿ, ಶ್ರೀಮತಿ ಕಮಲವ್ವ ಶಿವನಗೌಡ ಪಾಟೀಲ, ಅಧ್ಯಕ್ಷರು, ಚಿಕ್ಕಬಾಗೇವಾಡಿ ಗ್ರಾಮ ಪಂಚಾಯತಿ, ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹಾಗೂ ಬೈಲಹೊಂಗಲ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿ ಹಾಜರಾಗಿರುತ್ತಾರೆ. ಶ್ರೀಮತಿ ಕಮಲವ್ವ ಶಿವನಗೌಡ ಪಾಟೀಲ, ಅಧ್ಯಕ್ಷರು, ಚಿಕ್ಕಬಾಗೇವಾಡಿ ಗ್ರಾಮ ಪಂಚಾಯತಿ ಎ.ಸಿ.ಬಿ. ಯವರಿಂದ ನಮಗೆ ಟ್ರ್ಯಾಪ್ ಆಗಿರುವುದಿಲ್ಲ, ಕಂಟ್ರ್ಯಾಕ್ಟರ್‌ಗೆ ಕೆರೆ ಕಾಮಗಾರಿ ಮಾಡಿಕೊಡಲಿಲ್ಲವೆಂಬ ಕಾರಣಕ್ಕೆ ನನ್ನ ಮೇಲೆ ಸುಳ್ಳು ಆರೋಪ ಮಾಡಿರುತ್ತಾರೆ ಎಂದು ತಿಳಿಸಿರುತ್ತಾರೆ. ಪ್ರಕರಣ ನಡೆದಾಗ ಕರ್ತವ್ಯದಲ್ಲಿದ್ದ ಪಂಚಾಯತಿ ಅಭಿವೃದ್ಧಿ ಅಧಿಕಾರಿತಯವರಾದ ಶ್ರೀ ಅಣ್ಣಯ್ಯ ರವರು ಹಾಜರಿದ್ದು, ಸುಧೀರ್ ಕಂಗ್ರಾಳಿ ಎಂಬ ಗುತ್ತಿಗೆದಾರ ಅಧ್ಯಕ್ಷರಿಗೆ ರೂ.6500/-ಗಳನ್ನು ಕೊಟ್ಟಿರುತ್ತಾರೆ ಎಂದು ತಿಳಿಸಿದರು. ಎದುರುದಾರರಾದ ಗ್ರಾಮ ಪಂಚಾಯತಿ ಅಧ್ಯಕ್ಷರ ಪರ ವಕೀಲರು ಲಿಖಿತ ಹೇಳಿಕೆಯನ್ನು ಸಲ್ಲಿಸಿರುವುದಾಗಿ ತಿಳಿಸಿದರು.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 48(4) ರಲ್ಲಿ ಗ್ರಾಮ ಪಂಚಾಯತಿಯ ಪ್ರತಿಯೊಬ್ಬ ಅಧ್ಯಕ್ಷನನ್ನು ಮತ್ತು ಉಪಾಧ್ಯಕ್ಷನನ್ನು, ಅಧ್ಯಕ್ಷನಾಗಿ ಅಥವಾ ಉಪಾಧ್ಯಕ್ಷನಾಗಿ ಅವನ ಕರ್ತವ್ಯಗಳ ನಿರ್ವಹಣೆಯಲ್ಲಿ ನಿರಂತರ ಅಲಕ್ಷ್ಯತೆ ತೋರುತ್ತಿರುವುದಕ್ಕಾಗಿ ಅಥವಾ ದುರ್ನಡತೆಯ ತಪ್ಪಿತಸ್ಥನಾಗಿರುವುದಕ್ಕಾಗಿ ಅಧ್ಯಕ್ಷ ಅಥವಾ ಉಪಾಧ್ಯಕ್ಷ ಹುದ್ದೆಯಿಂದ, ಅವನಿಗೆ ಅಹವಾಲು ಹೇಳಿಕೊಳ್ಳಲು ಒಂದು ಅವಕಾಶವನ್ನು ಕೊಟ್ಟ ತರುವಾಯ ಮತ್ತು ಅವಶ್ಯಕವಾದಲ್ಲಿ ತಾಲ್ಲೂಕು ಪಂಚಾಯತಿಯಿಂದ ವರದಿಯೊಂದನ್ನು ಪಡೆದುಕೊಂಡು ಅದನ್ನು ಪರಿಶೀಲಿಸಿದ ತರುವಾಯ ಸರ್ಕಾರವು ಆ ಹುದ್ದೆಯಿಂದ ತೆಗೆದುಹಾಕಬಹುದಾಗಿರತಕ್ಕದ್ದು ಮತ್ತು ಹಾಗೆ ತೆಗೆದುಹಾಕಲಾದ ಅಧ್ಯಕ್ಷನು ಅಥವಾ ಉಪಾಧ್ಯಕ್ಷನು (2)ನೇ ಉಪಪ್ರಕರಣದ ಅಡಿಯಲ್ಲಿ ಸದಸ್ಯನಾಗಿರುವುದು ನಿಂತುಹೋಗಿರದಿದ್ದಲ್ಲಿ ಅವನು ಅಂಥ ಗ್ರಾಮ ಪಂಚಾಯತಿಯ ಸದಸ್ಯ ಹುದ್ದೆಯ ಉಳಿದ ಅವಧಿಯಲ್ಲಿ ಅಧ್ಯಕ್ಷನಾಗಿ ಅಥವಾ ಉಪಾಧ್ಯಕ್ಷನಾಗಿ ಮರು ಚುನಾವಣೆಗೆ ಅರ್ಹನಾಗಿರತಕ್ಕದ್ದಲ್ಲ ಎಂದು ಉಲ್ಲೇಖಿಸಲಾಗಿದೆ.

ಲಭ್ಯವಿರುವ ಎಲ್ಲಾ ದಾಖಲಾತಿಗಳು, ಆಪಾದಿತರ ಲಿಖಿತ ಹಾಗೂ ಮೌಖಿಕ ಹೇಳಿಕೆಗಳನ್ನು ಪರಿಶೀಲಿಸಲಾಗಿ, ಸದರಿ ಆಪಾದಿತ ಅಧ್ಯಕ್ಷರು ಲಂಚ ಪಡೆಯುವಾಗ ಎಸಿಬಿ ಟ್ರ್ಯಾಪ್ ಪ್ರಕರಣದಲ್ಲಿ ಭಾಗಿಯಾಗಿದ್ದು, ಈ ಬಗ್ಗೆ ಪೋಲಿಸ್ ಮಹಾ ನಿರ್ದೇಶಕರು, ಭ್ರಷ್ಟಾಚಾರ ನಿಗ್ರಹ ದಳ, ಬೆಂಗಳೂರು ಕೋರಿಕೆಯಂತೆ ಆರೋಪಗಳು ಸಾಬೀತಾಗಿರುವ ಹಿನ್ನೆಲೆಯಲ್ಲಿ ಸಕ್ಷಮ ನ್ಯಾಯಾಲಯದಲ್ಲಿ ಅಭಿಯೋಜನೆಗೆ ಒಳಪಡಿಸಲು ಅಭಿಯೋಜನಾ ಮಂಜೂರಾತಿಯನ್ನು ದಿನಾಂಕ 07.02.2018ರ ಸರ್ಕಾರಿ ಆದೇಶದಲ್ಲಿ ನೀಡಲಾಗಿದೆ. ಸದರಿ ಚುನಾಯಿತ ಪ್ರತಿನಿಧಿಯು ಎಸಿಬಿ ಟ್ರ್ಯಾಪ್ ಪ್ರಕರಣದಲ್ಲಿ ಭಾಗಿಯಾಗಿರುವುದು ಸಾಬೀತಾಗಿರುವುದರಿಂದ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 48(4) ರನ್ವಯ ಕ್ರಮ ಜರುಗಿಸಿ, ಅವರನ್ನು ಮಚ್ಚೆ ಗ್ರಾಮ ಪಂಚಾಯತಿಯ ಅಧ್ಯಕ್ಷ ಸ್ಥಾನದಿಂದ ತೆಗೆದು ಹಾಕಿರುವ ಕ್ರಮವು ಸಮಂಜಸವಾಗಿರುತ್ತದೆ ಎಂಬ ತೀರ್ಮಾನಕ್ಕೆ ಬರಲಾಗಿದೆ. ಅದರಂತೆ ಈ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 66 ಗ್ರಾಪಂಅ 2017 ಬೆಂಗಳೂರು, ದಿನಾಂಕ: 12.10.2018</u>**

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಶ್ರೀಮತಿ ಕಮಲವ್ವ ಶಿವನಗೌಡ ಪಾಟೀಲ, ಅಧ್ಯಕ್ಷರು, ಚಿಕ್ಕಬಾಗೇವಾಡಿ ಗ್ರಾಮ ಪಂಚಾಯತಿ, ಬೈಲಹೊಂಗಲ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರು ಲಂಚದ ಹಣವನ್ನು ಸ್ವೀಕರಿಸುವಾಗ ಭ್ರಷ್ಟಾಚಾರ ನಿಗ್ರಹ ದಳದ ಟ್ರ್ಯಾಪ್ ಆಗಿರುವ ಪ್ರಕರಣವು ದುರ್ನಡತೆಯ ಗಂಭೀರ ಸ್ವರೂಪದಾಗಿರುವುದರಿಂದ, ತನ್ನ ಕರ್ತವ್ಯಗಳನ್ನು ನಿರ್ವಹಿಸುವಾಗ ದುರ್ನಡತೆಯ ಅಥವಾ ತಲೆ ತಗ್ಗಿಸುವಂಥ ನಡತೆಯ ತಪ್ಪಿತಸ್ಥರಾಗಿರುವ ಹಿನ್ನೆಲೆಯಲ್ಲಿ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 48(4)ರನ್ವಯ ಕ್ರಮ ಜರುಗಿಸಿ, ಶ್ರೀಮತಿ ಕಮಲವ್ವ ಶಿವನಗೌಡ ಪಾಟೀಲ, ಅಧ್ಯಕ್ಷರು, ಚಿಕ್ಕಬಾಗೇವಾಡಿ ಗ್ರಾಮ ಪಂಚಾಯತಿ, ಬೈಲಹೊಂಗಲ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರನ್ನು ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ಚಿಕ್ಕಬಾಗೇವಾಡಿ ಗ್ರಾಮ ಪಂಚಾಯತಿಯ ಅಧ್ಯಕ್ಷ ಸ್ಥಾನದಿಂದ ತೆಗೆದು ಹಾಕಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

12/x/18

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

<u>ಪ್ರತಿ:</u>

1) ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬೆಳಗಾವಿ ಜಿಲ್ಲಾ ಪಂಚಾಯತಿ, ಬೆಳಗಾವಿ.
3) ಕಾರ್ಯನಿರ್ವಾಹಕ ಅಧಿಕಾರಿ, ಬೈಲಹೊಂಗಲ ತಾಲ್ಲೂಕು ಪಂಚಾಯತಿ, ಬೈಲಹೊಂಗಲ, ಬೆಳಗಾವಿ ಜಿಲ್ಲೆ. (ಸದರಿಯವರಿಗೆ ಆದೇಶದ ಪ್ರತಿಯನ್ನು ತಲುಪಿಸಿ, ಸ್ವೀಕೃತಿಯನ್ನು ಸರ್ಕಾರಕ್ಕೆ ಕಳುಹಿಸಲು ತಿಳಿಸಿದೆ)
4) ಶ್ರೀಮತಿ ಕಮಲವ್ವ ಶಿವನಗೌಡ ಪಾಟೀಲ, ಅಧ್ಯಕ್ಷರು, ಚಿಕ್ಕಬಾಗೇವಾಡಿ ಗ್ರಾಮ ಪಂಚಾಯತಿ, ಬೆಳಗಾವಿ ತಾಲ್ಲೂಕು ಮತ್ತು ಜಿಲ್ಲೆ.
5) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಚಿಕ್ಕಬಾಗೇವಾಡಿ ಗ್ರಾಮ ಪಂಚಾಯತಿ, ಬೆಳಗಾವಿ ತಾ. ಮತ್ತು ಜಿಲ್ಲೆ.
6) ಗಣಕ ಕೋಶ – ಇಲಾಖಾ ವೆಬ್ ಸೈಟ್‌ನಲ್ಲಿ ಪ್ರಕಟಿಸಲು.
7) ಹೆಚ್ಚುವರಿ ಪ್ರತಿ.

<u>ಪ್ರತಿಯನ್ನು ಮಾಹಿತಿಗಾಗಿ:</u>

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3) ನಿರ್ದೇಶಕರು(ಪಂ.ರಾಜ್-1), ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.